## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1036
ಸದಸ್ಯರ ಹೆಸರು : ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 18.12.2024
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮಗಳಲ್ಲಿರುವ ಕಂದಾಯ ಭೂಮಿ, ಗ್ರಾಮಠಾಣಾ, ಊರುಗುಪ್ಪೆ ಸರ್ವೆ ನಂಬರ್‌ನಲ್ಲಿ ಅನಾದಿ ಕಾಲದಿಂದಲೂ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ಹಕ್ಕುಪತ್ರವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಇಂತಹ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ವಾಸದ ಮನೆ ನಿರ್ಮಾಣ ಮಾಡಿಕೊಂಡು ವಾಸಿಸುತ್ತಿರುವ ಅರ್ಹ ಪ್ರಕರಣಗಳಿಗೆ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 94ಸಿ ಮತ್ತು 94ಸಿಸಿ ರಡಿ ಸಕ್ರಮಗೊಳಿಸಿ ಹಕ್ಕು ಪತ್ರ ನೀಡಲು ಕಾಯ್ದೆ / ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ ಕಂಇ 01 ಭೂದಾವು 2016 ಬೆಂಗಳೂರು ದಿನಾಂಕ: 01.03.2016 ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 20ಸಿಸಿಆರ್ ವಿ 2019 ದಿನಾಂಕ: 15.10.2019 ರಂತೆ ಸರ್ಕಾರಿ ಹಾಗೂ ಖಾಸಗಿ ಜಮೀನಿನಲ್ಲಿ ನೆಲೆಗೊಂಡಿರುವ ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಪರಿವರ್ತಿಸಲು ಗ್ರಾಮ/ ಉಪ ಗುರುತಿಸಿ ಗ್ರಾಮವಾಗಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಅದರಂತೆ ಕರ್ನಾಟಕ ಭೂ ಕಂದಾಯ ಕಾಯ್ದೆ 94ಡಿ ಹಾಗೂ ಕರ್ನಾಟಕ ಭೂಸುಧಾರಣೆ ಕಾಯ್ದೆ 38ಎ ರನ್ವಯ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. |
| ಆ) | ಕೊಡಗು, ಮೈಸೂರು, ಚಾಮರಾಜನಗರ ಹಾಗೂ ಇನ್ನಿತರೆ ಜಿಲ್ಲೆಗಳಲ್ಲಿ ಅನಾದಿ ಕಾಲದಿಂದಲೂ ಗ್ರಾಮಠಾಣಾ, ಊರುಗುಪ್ಪೆ ಸರ್ವೆ ನಂಬರ್‌ನಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವವರಿಗೆ ನಮೂನೆ 9 ಮತ್ತು 11ನೇ ಬಿ-ನಮೂನೆ ವಿತರಿಸದಿರುವ ಕಾರಣ, ಗ್ರಾಮ ಪಂಚಾಯಿತಿಯವರು ಈ ಜಾಗಕ್ಕೆ ಹಕ್ಕುಪತ್ರ ನೀಡಿ, ಇಲ್ಲವೇ ಆರ್.ಟಿ.ಸಿ. ನೀಡಿ, ಇಲ್ಲವೇ ಭೂ ಪರಿವರ್ತನೆ ಮಾಡಿಸಿಕೊಂಡು ಬನ್ನಿ ಎಂದು ತಿಳಿಸುತ್ತಿರುವುದು ಸರ್ಕಾರ ಗಮನಿಸಿದೆಯೇ; (ವಿವರ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ.ಕಂಇ 01 ಭೂದಾವು 2016 ದಿನಾಂಕ: 01-03-2016 ರಂತೆ ದಾಖಲೆ ರಹಿತ ಜನವಸತಿಗಳನ್ನು ಗುರುತಿಸಿ, ಹೊಸ ಕಂದಾಯ ಗ್ರಾಮಗಳನ್ನಾಗಿ ರಚನೆ ಮಾಡಿ, ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲಾಗುತ್ತಿದೆ.<br>ಹಕ್ಕುಪತ್ರಗಳನ್ನು ನೋಂದಣಿ ಇಲಾಖೆಯಲ್ಲಿ ನೋಂದಾಯಿಸಿ ತದನಂತರ ಫಲಾನುಭವಿಗಳ ಹೆಸರಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತ್ ನಲ್ಲಿ ಖಾತೆ ದಾಖಲಿಸಿ ನಮೂನೆ 9 ಮತ್ತು 11 ವಿತರಣೆಗೆ ಕ್ರಮವಹಿಸಲಾಗಿರುತ್ತದೆ. |
| ಇ) | ಗ್ರಾಮ ಠಾಣಗಳಿಗೆ, ಊರುಗುಪ್ಪೆ ಸರ್ವೆ | |

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| | ನಂಬರ್‌ನಲ್ಲಿರುವ ಸ್ವತ್ತು ಆರ್.ಟಿ.ಸಿ.ನಲ್ಲಿ ಗ್ರಾಮಸ್ಥರು ಎಂದು ಬರುತ್ತಿದ್ದು, ಇಂತಹ ಸ್ವತ್ತುಗಳಿಗೆ ಆರ್.ಟಿ.ಸಿ. ಭೂ ಪರಿವರ್ತನೆ ಮಾಡಿಸಲು ಸಾಧ್ಯವೇ; ಸರ್ಕಾರವು ಈ ಸಮಸ್ಯೆಯನ್ನು ನಿವಾರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ತೆಗೆದುಕೊಳ್ಳುವ ಕ್ರಮವೇನು; | ಗ್ರಾಮಠಾಣಾ ಊರುಗುಪ್ಪೆ ಸ.ನಂ.ನಲ್ಲಿರುವ ಸ್ವತ್ತು, ಆರ್.ಟಿ. ಸಿ ಗಳಲ್ಲಿ ಗ್ರಾಮಸ್ಥರು ಎಂದು ಬರುತ್ತಿದ್ದು ಇಂತಹ ಸ್ವತ್ತು ಮತ್ತು ಜಮೀನುಗಳನ್ನು ಭೂಪರಿವರ್ತನೆಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br><br>ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ-95ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂಪರಿವರ್ತನೆ ಮಾಡಲು ಅವಕಾಶವಿದ್ದು, ಕೃಷಿ ಜಮೀನಿನ ಭೂಮಾಲೀಕರು ಅವರ ಹೆಸರಿನಲ್ಲಿ ಪಹಣಿಯನ್ನು ಹೊಂದಿದ್ದಲ್ಲಿ ಆನ್ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂಪರಿವರ್ತನೆ ಮಾಡಿಕೊಳ್ಳಬಹುದಾಗಿರುತ್ತದೆ. |
| ಈ) | ಈ ಸ್ವತ್ತುಗಳ ದಾಖಲೆಗಳನ್ನು ಯಾವುದೇ ಬ್ಯಾಂಕಿಗಾಗಲೀ, ಖಾತೆ ಮಾಡಿಸುವುದಕ್ಕಾಗಲೀ, ಪೌತಿ ಖಾತೆ ವರ್ಗಾವಣೆಗಾಗಲೀ, ಇತರೆ ಕೆಲಸಗಳಿಗೆ ಸಲ್ಲಿಸಲು ಸಾಧ್ಯವಾಗದೆ, ಸಾರ್ವಜನಿಕ ನಿವಾಸಿಗಳು ಇಡೀ ರಾಜ್ಯದಲ್ಲಿ ತೊಂದರೆಗೆ ಒಳಗಾಗಿರುವುದನ್ನು ಮನಗಂಡು "94ಸಿ" ಅನ್ನು ಒಂದು ವರ್ಷದ ಮಟ್ಟಿಗೆ ಜಾರಿಗೆ ತಂದು ಹಕ್ಕುಪತ್ರ ವಿತರಿಸಲು ಸರ್ಕಾರ ಆದೇಶ ಹೊರಡಿಸುವುದೇ? (ಸ್ಪಷ್ಟ ಉತ್ತರ ನೀಡುವುದು) | ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಆರ್‌ಡಿ 150 ಎಲ್‌ಜಿಕ್ಯೂ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು